ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ     ದಿನಾಂಕ : DATE : 11/4/21

# ಕರ್ಫ್ಯೂಗೆ ಮಂಗಳೂರಿನಲ್ಲಿ ಬಿಜೆಪಿ ಶಾಸಕರಿಂದಲೇ ತೀವ್ರ ವಿರೋಧ

ಕ.ಪ್ರ.

ಮಂಗಳೂರು: 10 ದಿನಗಳ ರಾತ್ರಿ ಕರ್ಫ್ಯೂಗೆ ಕರಾವಳಿ ಭಾಗದ ಬಿಜೆಪಿ ಶಾಸಕರೇ ವಿರೋಧ ವ್ಯಕ್ತಪಡಿಸಿದ್ದಾರೆ. ಜೊತೆಗೆ ಹಿಂದೂಪರ ಸಂಘಟನೆಗಳಿಂದಲೂ ತೀವ್ರ ವಿರೋಧ ವ್ಯಕ್ತವಾಗಿದೆ. ಕರಾವಳಿಯಲ್ಲಿ ಬೇಸಗೆಯ ಈ ಅವಧಿಯಲ್ಲಿ ಪತ್ತನಾಜೆ ವರೆಗೆ(ಸುಮಾರು ಮೇ ತಿಂಗಳ ಅಂತ್ಯ)ಜಾತ್ರೆ, ದೈವಗಳ ನೇಮೋತ್ಸವ ಹಾಗೂ ಯಕ್ಷಗಾನ ಪ್ರದರ್ಶನಗಳ ಭರಾಟೆ ರಾತ್ರಿ ಇಡೀ ನಡೆಯುವುದು ವಾಡಿಕೆ. ಕೊರೋನಾ ಕಾರಣಕ್ಕೆ ಧಾರ್ಮಿಕ ನಂಬಿಕೆ, ನಡವಳಿಕೆಗಳಿಗೆ ಅಡ್ಡಿಪಡಿಸದಂತೆ ಉಡುಪಿ ಮತ್ತು ಮಂಗಳೂರಿನ ಶಾಸಕರು ಒಟ್ಟಾಗಿ ಅಧಿಕಾರಿ ಗಳು ಹಾಗೂ ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದಾರೆ. ರಾತ್ರಿ ಹೊತ್ತಿನಲ್ಲಿ ನಡೆವ ಧಾರ್ಮಿಕ ಕಾರ್ಯಕ್ರಮಗಳಿಗೆ ಕೊರೋನಾ ನಿರ್ಬಂಧದಿಂದ ವಿನಾಯ್ತಿ ನೀಡಬೇಕು ಎಂದು ಮಂಗಳೂರು ದಕ್ಷಿಣ ಶಾಸಕ ವೇದವ್ಯಾಸ ಕಾಮತ್, ಡಾ.ಭರತ್ ಶೆಟ್ಟಿ, ವಿಶ್ವಹಿಂದೂ ಪರಿಷತ್ ಮುಖಂಡ ಶರಣ್ ಪಂಪ್‌ವೆಲ್ ಹಾಗೂ ಕಲ್ಲೂರ ಪ್ರತಿಷ್ಠಾನ ಅಧ್ಯಕ್ಷ ಪ್ರದೀಪ್ ಕಲ್ಲೂರ ಆಗ್ರಹಿಸಿದ್ದಾರೆ.